# Akashvani : Bangalore
# Regional Bulletin In Kannada
# 14.04.2026 / 18.40 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಆದಿಚುಂಚನಗಿರಿ ಮಠಕ್ಕೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ಭೈರವೈಕ್ಯ ಮಂದಿರ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗಿ

೨. ಪಕ್ಷದಲ್ಲಿ ಶಾಸಕರು ಶಿಸ್ತು ಕಾಪಾಡುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ

೩. ಪರಿಶಿಷ್ಟರಿಗೆ ಖಾಸಗಿ ಮಾದರಿಯಲ್ಲಿ ಬಡಾವಣೆ ನಿರ್ಮಾಣ - ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟನೆ

೪. ಬೆಂಗಳೂರಿನಲ್ಲಿ ನಾಳೆ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯ- ಭದ್ರತೆಗಾಗಿ ೨ ಸಾವಿರ ಪೊಲೀಸರ ನಿಯೋಜನೆ

೫. ಮುಂದಿನ ಐದು ದಿನಗಳಲ್ಲಿ ಉತ್ತರ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಉಷ್ಣಾಂಶ ಗಣನೀಯ ಏರಿಕೆ- ಹವಮಾನ ಇಲಾಖೆ ಮುನ್ಸೂಚನೆ

***************

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿ ಮಠಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಲಿರುವ ಹಿನ್ನೆಲೆಯಲ್ಲಿ ನಾಳೆ ಬೆಳಗ್ಗೆ ೧೦ ಗಂಟೆ ೫ ನಿಮಿಷಕ್ಕೆ ಬೆಂಗಳೂರಿನ ಎಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ಎಚ್.ಎ.ಎಲ್ ನಿಂದ ಆದಿಚುಂಚನಗಿರಿ ತಪೋವನಕ್ಕೆ ಆಗಮಿಸಲಿರುವ ಅವರು, ಬಳಿಕ ಆದಿಚುಂಚನಗಿರಿ ಕ್ಷೇತ್ರಕ್ಕೆ ರಸ್ತೆ ಮೂಲಕ ತೆರಳಲಿದ್ದಾರೆ.

ಈ ಹಿನ್ನೆಲೆಯಲ್ಲಿ ನಾಳೆ ಮಧ್ಯಾಹ್ನದವರೆಗೆ ಆದಿಚುಂಚನಗಿರಿ ಕ್ಷೇತ್ರಕ್ಕೆ ಭಕ್ತರಿಗೆ ಪ್ರವೇಶ ನಿರ್ಬಂಧಿಸಿರುವುದಾಗಿ ಪೀಠಾಧ್ಯಕ್ಷ ಡಾ.ನಿರ್ಮಲಾನಂದ ಸ್ವಾಮೀಜಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಭೈರವೈಕ್ಯ ಮಂದಿರ ಹಾಗೂ ಬಾಲಗಂಗಾಧರನಾಥ ಶ್ರೀಗಳ ಗದ್ದುಗೆ ಉದ್ಘಾಟನಾ ಕಾರ್ಯ ನೆರವೇರಿಸಲಿದ್ದಾರೆ. ಇದು ಪಕ್ಷಾತೀತ ಕಾರ್ಯಕ್ರಮವಾಗಿದ್ದು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೇರಿದಂತೆ ರಾಜ್ಯದ ಹಲವು ಸಚಿವರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಪ್ರಧಾನಿ, ಆಗಮನದ ಹಿನ್ನೆಲೆಯಲ್ಲಿ ಕ್ಷೇತ್ರದಲ್ಲಿ ಹಾಗೂ ಮಂಡ್ಯ ಜಿಲ್ಲೆಯಲ್ಲಿ ಹೆಚ್ಚಿನ ಭದ್ರತೆ ಏರ್ಪಡಿಸಲಾಗಿದೆ.

***************

ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ವಿರುದ್ಧ ಮುಸ್ಲಿಂ ಮತದಾರರನ್ನು ಪ್ರಚೋದಿಸಿದ ವಿವಾದದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಸೀರ್ ಅಹ್ಮದ್ ಅವರನ್ನು ವಜಾಗೊಳಿಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮದೇ ಆದ ವಿವಿಧ ಮೂಲಗಳಿಂದ ಮಾಹಿತಿ ಪಡೆದು, ಪಕ್ಷದ ಹಿತದೃಷ್ಟಿಯಿಂದ ನಸಿರ್ ಅಹಮ್ಮದ್ ವಿಚಾರದಲ್ಲಿ ತೀರ್ಮಾನ ತೆಗೆದುಕೊಂಡಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದಲ್ಲಿ ಶಿಸ್ತು ಬಹಳ ಮುಖ್ಯ ಎಂದು ತಿಳಿಸಿದ್ದಾರೆ. ದಾವಣಗೆರೆ ದಕ್ಷಿಣಕ್ಕೆ ಎಲ್ಲರನ್ನೂ ವಿಶ್ವಾಸಕ್ಕೆ ಪಡೆದುಕೊಂಡೇ ಅಭ್ಯರ್ಥಿ ಆಯ್ಕೆ ಮಾಡಲಾಗಿತ್ತು ಎಂದು ಸಮರ್ಥಿಸಿಕೊಂಡಿದ್ದಾರೆ.

ಇದೇ ವೇಳೆ, ಶಾಸಕರು ದೆಹಲಿಗೆ ತೆರಳಿ ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪಿಲ್ಲ. ಆದರೆ, ಶಿಸ್ತು ಕಾಪಾಡುವಂತೆ ಸೂಚನೆ ನೀಡಿದ್ದಾರೆ.

***************

ರಾಜ್ಯದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನರಿಗೆ ಖಾಸಗಿ ಬಡಾವಣೆ ಮಾದರಿಯಲ್ಲಿ ಮೂಲಸೌಕರ್ಯ ಹೊಂದಿರುವ ಬಡಾವಣೆ ಅಭಿವೃದ್ಧಿಪಡಿಸಿ ನಿವೇಶನಗಳನ್ನು ಹಂಚಿಕೆ ಮಾಡಲು "ಬುದ್ಧ, ಬಸವ, ಅಂಬೇಡ್ಕರ್ ನಿವೇಶನ ಹಂಚಿಕೆ" ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಡಾ.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಫಲಾನುಭವಿಗಳ ಆಯ್ಕೆ ಮತ್ತು ನಿವೇಶನ ಹಂಚಿಕೆಯು ಸದ್ಯಕ್ಕೆ ಜಾರಿಯಲ್ಲಿರುವ ನಿಯಮಗಳ ಪ್ರಕಾರ ಆಯಾ ಗ್ರಾಮ ಪಂಚಾಯತಿ ಮತ್ತು ಸ್ಥಳೀಯ ಸಂಸ್ಥೆಗಳು ನಡೆಸಲಿವೆ ಎಂದು ಹೇಳಿದ್ದಾರೆ. ಪ್ರಾಯೋಗಿಕವಾಗಿ ಯೋಜನೆ ಜಾರಿಗೊಳಿಸಲಾಗುತ್ತಿದ್ದು, ಸಾಧಕ-ಬಾಧಕ ಪರಿಶೀಲಿಸಿ ರಾಜ್ಯದಾದ್ಯಂತ ಒಂದು ಸಾವಿರ ಎಕರೆ ಜಾಗದಲ್ಲಿ ಬಡಾವಣೆ ಅಭಿವೃದ್ಧಿಪಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದೆ. ಸುಮಾರು ೨ ಸಾವಿರ ಪೊಲೀಸರನ್ನು ನಿಯೋಜನೆ ಮಾಡಲಾಗಿದೆ. ಈ ನಡುವೆ ಬಿಎಂಟಿಸಿ ಹಾಗೂ ನಮ್ಮ ಮೆಟ್ರೋ ನಾಳೆ ರಾತ್ರಿ ೨ ಗಂಟೆಯವರೆಗೆ ಕಾರ್ಯ ನಿರ್ವಹಿಸಲು ನಿರ್ಧರಿಸಿದೆ.

ಪ್ರಯಾಣಿಕರ ಸುರಕ್ಷತೆ ಹಾಗೂ ಅನುಕೂಲಕರ ಸಂಚಾರವನ್ನು ಕಲ್ಪಿಸುವ ಉದ್ದೇಶದಿಂದ ಬಿಎಂಆರ್‌ಸಿಎಲ್ ಮೆಟ್ರೋ ರೈಲಿನ ಸೇವಾ ಅವಧಿಯನ್ನು ವಿಸ್ತರಿಸುತ್ತಿದೆ. ಎಲ್ಲಾ ಟರ್ಮಿನಲ್ ನಿಲ್ದಾಣಗಳಿಂದ ಕೊನೆಯ ಮೆಟ್ರೋ ರೈಲು ಸೇವೆ ರಾತ್ರಿ ೧೧ ಗಂಟೆಯಿಂದ ಮಧ್ಯರಾತ್ರಿ ೨ ಗಂಟೆಯವರೆಗೆ ಕಾರ್ಯ ನಿರ್ವಹಿಸಲಿದೆ.

***************

ರಾಜ್ಯದ ವಿವಿಧೆಡೆ ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ೧೩೫ನೇ ಜಯಂತಿ ನಡೆಯಿತು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಜಗತ್ತೇ ಮೆಚ್ಚುವಂತಹ ಸಂವಿಧಾನವನ್ನು ನೀಡಿದರು ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಸೆಂಟ್ರಲ್ ಕಾಲೇಜಿನ ಗಡಿಯಾರ ಗೋಪುರದ ಅವರಣದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ೧೩೫ನೇ ಜಯಂತಿ ಆಚರಿಸಲಾಯಿತು.

ಅಂಬೇಡ್ಕರ್ ಅವರ ಜೀವನ ಚರಿತ್ರೆ, ಸಾಧನೆಯನ್ನು ಓದಿದರೆ ಸಾಲದು, ಜತೆಗೆ ಅವರ ಸಂದೇಶ, ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಕರೆ ನೀಡಿದ್ದಾರೆ.

ಬದುಕಿನ ಹಾದಿಯಲ್ಲಿ ಎಷ್ಟೇ ಕಷ್ಟಗಳು ಎದುರಾದರೂ ಶಿಕ್ಷಣದ ಮೇಲಿನ ಆಸಕ್ತಿ ಮತ್ತು ನಿರಂತರ ಪರಿಶ್ರಮವಿದ್ದರೆ ಯಶಸ್ಸು ಕಟ್ಟಿಟ್ಟಬುತ್ತಿ. ಇದಕ್ಕೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನವೇ ನಮಗೆ ಬಹುದೊಡ್ಡ ಉದಾಹರಣೆ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅಭಿಪ್ರಾಯಪಟ್ಟಿದ್ದಾರೆ.

ಚಾಮರಾಜನಗರ ಜಿಲ್ಲಾಕೇಂದ್ರ ಸೇರಿದಂತೆ ಗುಂಡ್ಲುಪೇಟೆ, ಕೊಳ್ಳೇಗಾಲ ಹಾಗೂ ಹನೂರು ತಾಲೂಕು ಕೇಂದ್ರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲೂ ಇಂದು ಡಾ.ಬಿ.ಆರ್.ಅಂಬೇಡ್ಕರ್ ಅವರ ೧೩೫ ನೇ ಜಯಂತಿ ಆಚರಿಸಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಇಡೀ ಮಾನವ ಸಮುದಾಯಕ್ಕೆ ನೀಡಿರುವ ಸಮಾನತೆಯ ಸಂದೇಶವನ್ನು ಪ್ರತಿಯೊಬ್ಬರೂ ಅನುಸರಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ.

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ೩೩ ಶೇಕಡಾ ಮೀಸಲಾತಿ ನೀಡುವ ಕ್ರಮವು ಮಹಿಳೆಯರ ರಾಜಕೀಯ ಪ್ರತಿನಿಧಿತ್ವ ಹೆಚ್ಚಿಸಲು ನೆರವಾಗಲಿದೆ ಎಂದು ಬಾಗಲಕೋಟೆ ಬಿಜೆಪಿ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಶಶಿಕಲಾ ಸುರೇಶ್ ಮಜ್ಜಿಗಿ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಸ್ವಚ್ಛತಾ ಅಭಿಯಾನದಡಿ ಮನೆಮನೆಗೆ ಶೌಚಾಲಯ ನಿರ್ಮಾಣದಿಂದ ಮಹಿಳೆಯರಿಗೆ ಗೌರವಯುತ ಜೀವನ ಸಾಧ್ಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಶಶಿಕಲಾ ಸುರೇಶ್ ಮಜ್ಜಿಗೆ

***************

ರಾಜ್ಯದ ಹಲವೆಡೆ ಇಂದು ಹಗುರ ಮಳೆಯಾಗಿದೆ. ಕರ್ನಾಟಕದ ಕರಾವಳಿ ಹಾಗೂ ಉತ್ತರ ಒಳನಾಡಿನ ಕೆಲವೆಡೆ ಇಂದು ಮಳಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಮುಂದಿನ ಐದು ದಿನಗಳಲ್ಲಿ ಉತ್ತರ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಉಷ್ಣಾಂಶ ಗಣನೀಯವಾಗಿ ಏರಿಕೆಯಾಗುವ ಸಾಧ್ಯತೆಯಿದೆ ಎಂದು ಮುನ್ನೆಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಕನಿಷ್ಠ ಉಷ್ಣಾಂಶ ೨೬ ಡಿಗ್ರಿ ಸೆಲ್ಸಿಯಸ್ ದಾಖಲಾಗಿತ್ತು. ಕಲಬುರಗಿಯಲ್ಲಿ ೪೨ ಡಿಗ್ರಿ, ರಾಯಚೂರು, ವಿಜಯಪುರ ತಲಾ ೪೦ ಡಿಗ್ರಿ, ಬೀದರ್ ೩೯ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿತ್ತು.

***************

ಕೋಲಾರ ಜಿಲ್ಲೆಯ ಅರಹಳ್ಳಿ ಕೆರೆಯಲ್ಲಿ ಮುಳುಗಿ ಇಬ್ಬರು ಮಹಿಳೆಯರು ಮೃತಪಟ್ಟಿದ್ದಾರೆ. ಮಕ್ಕಳನ್ನು ರಕ್ಷಿಸಲು ನೀರಿಗೆ ಇಳಿದ ಇಬ್ಬರು ಮಹಿಳೆಯರು ಜೀವ ಕಳೆದುಕೊಂಡಿದ್ದಾರೆ. ಮಕ್ಕಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸ್ಥಳೀಯರು ತಕ್ಷಣ ನೆರವಿಗೆ ಧಾವಿಸಿದರೂ ಮಹಿಳೆಯರ ಜೀವ ಉಳಿಸಲು ಸಾಧ್ಯವಾಗಿಲ್ಲ.

ಘಟನಾ ಸ್ಥಳಕ್ಕೆ ಕೋಲಾರ ಗ್ರಾಮಾಂತರ ಪೊಲೀಸ್ ಠಾಣೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

***************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗೆ ವಿಶೇಷ ಆರೋಗ್ಯ ತಪಾಸಣಾ ಶಿಬಿರಗಳನ್ನು ಇದೇ ೧೫ರಿಂದ ಜಿಲ್ಲೆಯ ಖಾಸಗಿ ವೈದ್ಯಕೀಯ ಕಾಲೇಜುಗಳ ಸಹಯೋಗದೊಂದಿಗೆ ಏರ್ಪಡಿಸಲಾಗಿದೆ.

*******ಮುಕ್ತಾಯ********